**ಸಾಕ್ಷಿಯನ್ನು ದಿನಾಂಕ: 20-08-2024 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

ಈ ದಿನ ನನ್ನ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ. ಸದರಿ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳನ್ನು ವಕೀಲರು ನನಗೆ ಓದಿ ತಿಳಿಸಿರುತ್ತಾರೆ. ಆದ್ದರಿಂದ, ನನ್ನ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆ ಎಂದು ಪರಿಗಣಿಸಬೇಕಾಗಿ ಕೋರುತ್ತೇನೆ.

**ಮುಂದುವರೆದ ಮುಖ್ಯ ವಿಚಾರಣೆ :- ವಾದಿ ಪರ ವಕೀಲರಾದ ಶ್ರೀ ಮೋಹನ್ ರವರಿಂದಃ**

ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡಿರುತ್ತೇನೆ.

1) ದಾವಾ ಜಮೀನನ್ನು ಅಡಮಾನ ಮಾಡಿ ಪ್ರತಿವಾದಿಯು ಸಾಲ ಪಡೆದ ಬಗ್ಗೆ ಆಕೆಯು ನನ್ನ ಪರವಾಗಿ ಬರೆದುಕೊಟ್ಟಿರುವ ಅಡಮಾನ ಪತ್ರವನ್ನು ಹಾಜರು ಮಾಡಿದ್ದೇನೆ. ಸದರಿ ಅಡಮಾನ ಪತ್ರಕ್ಕೆ ಪ್ರತಿವಾದಿ ಮತ್ತು ಸಾಕ್ಷಿಗಳು ಸಹಿ ಮಾಡಿರುತ್ತಾರೆ. ಸಾಕ್ಷಿಯು ಎಲ್ಲರ ಸಹಿಗಳನ್ನು ಗುರುತಿಸಿರುತ್ತಾರೆ. ದಾಖಲೆಯನ್ನು ನಿಪಿ-1, ಅದರ ಮೇಲಿನ ಪ್ರತಿವಾದಿಯ ಸಹಿಗಳನ್ನು ನಿಪಿ-1(ಎ) ಯಿಂದ ನಿಪಿ-1(ಸಿ), ವಾದಿಯ ಸಹಿಯನ್ನು ನಿಪಿ-1(ಡಿ) ಹಾಗೂ ಸಾಕ್ಷಿಗಳ ಸಹಿಗಳನ್ನು ನಿಪಿ-1(ಇ) ಮತ್ತು ನಿಪಿ-1(ಎಫ್) ಎಂದು ಗುರುತಿಸಲಾಯಿತು.

2) ದಾವಾ ಜಮೀನಿನ ಋಣಭಾರ ಪತ್ರವನ್ನು ಹಾಜರು ಮಾಡಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

**(ವಾದಿ ಪರ ವಕೀಲರು ದಾಖಲೆಗಳನ್ನು ನಿಶಾನೆಗಳನ್ನಾಗಿ ಗುರುತಿಸಿಕೊಳ್ಳಲು ಕಾಲಾವಕಾಶ ಕೋರಿದ್ದರಿಂದ ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು).**

**(ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).**

**ಓ.ಹೇ.ಕೇ.ಸ.ಇ.ಎ. ಒಪ್ಪಿಕೊಂಡಿರುತ್ತಾರೆ,**

**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ದೇವನಹಳ್ಳಿ.**